ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 18 ನೇ ಮಾರ್ಚ್, 2020

ಆರ್ಥಿಕ ಅಭಿವೃದ್ದಿಗಾಗಿ ಸರ್ಕಾರದ ಯೋಜನೆಗಳು

ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-

1113 (1298) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಡತನ ರೇಖೆಗಿಂತ ಕೆಳಗೆ ವಾಸಿಸುತ್ತಿರುವ ಪರಿಶಿಷ್ಟ ಜಾತಿಯ ಕುಟುಂಬಗಳ ಸಂಖ್ಯೆ ಎಷ್ಟು ; ಮತ್ತು ಸದರಿ ಕುಟುಂಬಗಳ ಆರ್ಥಿಕ ಅಭಿವೃದ್ದಿಗಾಗಿ ಸರ್ಕಾರವು ಕೈಗೊಂಡ ಕ್ರಮಗಳೇನು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಸದರಿ ಕುಟುಂಬಗಳ ಆರ್ಥಿಕ ಪ್ರಗತಿಯ ಶ್ರೇಣಿ ಎಷ್ಟು ; ಸೂಕ್ತ ಬಡ ಕುಟುಂಬಗಳಿಗೆ ಸರ್ಕಾರದ ವತಿಯಿಂದ ಯೋಜನೆಗಳು ನ್ಯಾಯಯುತವಾಗಿ ತಲುಪಿದೆಯೇ ;

(ಇ) ಬಡತನ ರೇಖೆಯನ್ನು ಅಳೆಯಲು ಸರ್ಕಾರವು ಕೈಗೊಳ್ಳುವ ಮಾನದಂಡಗಳೇನು ; ಬಡತನ ರೇಖೆಯನ್ನು ಗುರುತಿಸಿದ ನಂತರ ಸದರಿ ಕುಟುಂಬಗಳಿಗೆ ಎಷ್ಟು ಅವಧಿಯಲ್ಲಿ ಯೋಜನೆಗಳು ತಲುಪುತ್ತವೆ ; ಈ ಯೋಜನೆಯನ್ನು ತಲುಪಿಸುವಲ್ಲಿ ತಡವಾಗದೇ ಇರುವ ಹಾಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಮಹಿಳಾ ಫಲಾನುಭವಿಗಳು ಹಾಗೂ ವಿಕಲಚೇತನರಿಗೆ ಸರಿಯಾದ ಸಮಯಕ್ಕೆ ಮತ್ತು ಅತೀ ಬೇಗ ಯೋಜನೆಗಳು ತಲುಪುತ್ತಿವೆಯೇ; ಈ ಸಂಬಂಧ ಸರ್ಕಾರ ಕೈಗೊಂಡ ಕ್ರಮಗಳೇನು ; ಹಾಗಿದ್ದಲ್ಲಿ, ಪ್ರಗತಿ ಪ್ರಮಾಣ ಎಷ್ಟು ?